ವಿಷಯ : ದ.ಕನ್ನಡ ಜಿಲ್ಲೆಯ ಪ್ರೌಢಶಾಲೆಗಳಲ್ಲಿ ಫೇಲಾದ ವಿದ್ಯಾರ್ಥಿಗಳಿಗೆ ಪುನಃ ಪ್ರವೇಶಾವಕಾಶ.

1346 (1802)-ಶ್ರೀ ಕೆ. ಪ್ರತಾಪ್‌ಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರೌಢ ಶಾಲೆಗಳಲ್ಲಿ ಫೇಲಾದ ವಿದ್ಯಾರ್ಥಿಗಳಿಗೆ ಪುನಃ ಶಾಲೆಗೆ ಹೋಗಲು ಪ್ರವೇಶವಕಾಶ ಕೊಡದೇ ಇರುವುದು ಸರಕಾರ ಗಮನಿಸಿದೆಯೇ?

ಆ) ಇದನ್ನು ಸರಿಪಡಿಸಲು ಸರಕಾರವು ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳುವುದೆ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು.)

ಅ) ಹೌದು.

ಆ) ಹೌದು.

ವಿಷಯ : ಕುಂದಾಪುರ ತಾಲ್ಲೂಕಿನಲ್ಲಿರುವ ಪ್ರೌಢಶಾಲೆಗಳಲ್ಲಿ ಅಧ್ಯಾಪಕರ ಕೊರತೆ.

1349 (1805)-ಶ್ರೀ ಕೆ. ಪ್ರತಾಪ್‌ಚಂದ್ರಶೆಟ್ಟಿ (ಕಂದಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕುಂದಾಪುರ ತಾಲ್ಲೂಕಿನಲ್ಲಿ ಯಾವ ಯಾವ ಪ್ರೌಢಶಾಲೆಯಲ್ಲಿರುವ ಅಧ್ಯಾಪಕರ ಕೊರತೆ ಎಷ್ಟು?

ಆ) ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? (ವಿಷಯವಾರು ಶಾಲಾವಾರು ವಿವರ ನೀಡುವುದು)

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು)

ಅ) ಕುಂದಾಪುರ ತಾಲ್ಲೂಕಿನ 19 ಸರ್ಕಾರಿ ಪ್ರೌಢಶಾಲೆಗಳಲ್ಲಿ ಅಧ್ಯಾಪಕರ ಕೊರತೆ ಇಲ್ಲ. ಆದರೆ ಕೆಳಕಂಡ ಸರ್ಕರಿ ಪ್ರೌಢಶಾಲೆಗಳಲ್ಲಿ ಮುಖ್ಯಶಿಕ್ಷಕರ ಹಾಗೂ ಎಲ್ಲಾ 19 ಸರ್ಕಾರಿ ಪ್ರೌಢಶಾಲೆಗಳಲ್ಲಿ ವೃತ್ತಿಶಿಕ್ಷಕರ ಹುದ್ದೆಗಳು ತೆರವಿವೆ.